# ಸಿಬಿಐ ಬಲೆಗೆ ಬಿದ್ದ ವಿನಯ ಕುಲಕರ್ಣಿ

## ಯೋಗೀಶಗೌಡ ಹತ್ಯೆ ಕೇಸ್‌ನಲ್ಲಿ ಅರೆಸ್ಟ್

**ಧಾರವಾಡ:** ತೀವ್ರ ಸಂಚಲನ ಸೃಷ್ಟಿಸಿದ್ದ ಹೆಬ್ಬಳ್ಳಿ ಜಿಪಂ ಸದಸ್ಯರಾಗಿದ್ದ ಯೋಗೀಶಗೌಡರ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ವಿನಯ ಕುಲಕರ್ಣಿ ಅವರನ್ನು ಸಿಬಿಐ ಗುರುವಾರ ಬಂಧಿಸಿದೆ. ಅವರನ್ನು ಒಂದು ದಿನದ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಗುರುವಾರ ಬೆಳಗ್ಗೆ 6.30ರ ಸುಮಾರಿಗೆ ಕುಲಕರ್ಣಿ ಮನೆಗೆ ತೆರಳಿದ ಸಿಬಿಐ ಅಧಿಕಾರಿಗಳು ಅವರನ್ನು ವಶಕ್ಕೆ ಪಡೆದು ಧಾರವಾಡ ಉಪನಗರ ಠಾಣೆಗೆ ಕರೆ ತಂದು ಇಡೀ ದಿನ ವಿಚಾರಣೆ ನಡೆಸಿದರು. ಈಗಾಗಲೇ ಎರಡು ಬಾರಿ ವಿಚಾರಣೆ ಎದುರಿಸಿದ್ದ ವಿನಯ ಅವರ ಸಹೋದರ ವಿಜಯ ಕುಲಕರ್ಣಿ ಅವರನ್ನೂ ಸಹ ಅವರ ಸ್ವಗೃಹದಲ್ಲಿ ವಶಕ್ಕೆಪಡೆದು ಠಾಣೆಗೆಕರೆತಂದುಪ್ರತ್ಯೇಕವಾಗಿಯೇ ಸಿಬಿಐ ಅಧಿಕಾರಿಗಳು ವಿಚಾರಣೆ ನಡೆಸಿದರು.

ಸಂಜೆವರೆಗೂ ವಿಚಾರಣೆ ನಡೆಸಿದ ಅಧಿಕಾರಿಗಳು ವಿನಯ ಅವರನ್ನು ಬಂಧಿಸಿ ಬಳಿಕ ಜಿಲ್ಲಾಸ್ಪತ್ರೆಗೆ ಕರೆದೊಯ್ದು ವೈದ್ಯಕೀಯ ತಪಾಸಣೆ ನಡೆಸಿದರು. ನಂತರ 2ನೇ ಹೆಚ್ಚುವರಿ ಜಿಲ್ಲಾ ಸತ್ರ ನ್ಯಾಯಾಲಯಕ್ಕೆ ಹಾಜರುಪಡಿಸಿದರು. ಕೋರ್ಟ್ ಶುಕ್ರವಾರ ಸಂಜೆವರೆಗೆ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿತು. ಬಂಧನ ಬೆನ್ನಲ್ಲೇ ಬಳ್ಳಾರಿ, ಬೆಂಗಳೂರು ಜೈಲಿಗೆ ಕಳುಹಿಸಲಾಗುತ್ತದೆ ಎನ್ನುವ ಸುದ್ದಿ ಹರಡಿತ್ತು. ಕೊನೇ ಕ್ಷಣದಲ್ಲಿ ಬೆಳಗಾವಿಯ ಹಿಂಡಲಗಾ ಜೈಲಿಗೆ ಕರೆದೊಯ್ಯಲಾಯಿತು. ಸಹೋದರ ವಿಜಯ ಕುಲಕರ್ಣಿ ಅವರನ್ನು ತಡರಾತ್ರಿವರೆಗೂ ಉಪ ನಗರ ಠಾಣೆಯಲ್ಲಿಯೇ ವಿಚಾರಣೆ ನಡೆಸಿದರು.

**ಆಕ್ರೋಶ:** ಬಂಧನ ಸುದ್ದಿ ತಿಳಿಯುತ್ತಿದ್ದಂತೆಯೇ ಬೆಂಬಲಿಗರು ಉಪ ನಗರ ಠಾಣೆ ಎದುರು ಜಮಾಯಿಸಿ ಬಿಜೆಪಿ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ▶ 5ನೇ ಪುಟಕ್ಕೆ



ಧಾರವಾಡ ನ್ಯಾಯಾಲಯದಿಂದ ಸಿಬಿಐ ತಂಡದೊಂದಿಗೆ ಹೊರಗಡೆ ಬಂದ ಮಾಜಿ ಸಚಿವ ವಿನಯ ಕುಲಕರ್ಣಿ.

> **ಇದು ನೂರಕ್ಕೆ ನೂರರಷ್ಟು ರಾಜಕೀಯ ಪ್ರೇರಿತ ಕೆಲಸ. ಇದರಲ್ಲಿ ಏನು ಹೇಳುವುದಿದೆ?**
> • ವಿನಯ ಕುಲಕರ್ಣಿ, ಮಾಜಿ ಸಚಿವ

> **ನನ್ನ ಮಗನ ಹತ್ಯೆಯಾಗಿ 4 ವರ್ಷ ಆಯ್ತು. ಅವನ ಆತ್ಮಕ್ಕೆ ಶಾಂತಿ ಸಿಗೋ ಭರವಸೆ ಐತ್ರಿ. ನನ್ನ ಮಗ ಗುರುನಾಥಗೌಡ ಇದರ ಸಂಬಂಧ ಬಾಳ ಹೋರಾಟ ಮಾಡ್ಯಾನ್ರಿ. ವಿನಯ ಕುಲಕರ್ಣಿಯನ್ನು ವಿಚಾರಣೆ ಗೊಳಪಡಿಸಿದ್ದು ಖುಷಿ ಕೊಟ್ತೈತಿ.**
> • ತುಂಗಮ್ಮ, ಯೋಗೀಶಗೌಡರ ತಾಯಿ

## ಬಂಧನಕ್ಕೆ ಪ್ರಮುಖರ ತೀವ್ರ ಆಕ್ಷೇಪ

ಮಾಜಿ ಸಚಿವ ವಿನಯ ಕುಲಕರ್ಣಿ ಬಂಧನ ವಿರುದ್ಧ ಕಾಂಗ್ರೆಸ್ ನಾಯಕರು, ಹರಿಹರದ ಪಂಚಮಸಾಲಿ ಜಗದ್ಗುರು ಪೀಠದ ಶ್ರೀವಚನಾನಂದ ಸ್ವಾಮೀಜಿ, ಕೂಡಲಸಂಗಮದ ಪಂಚಮಸಾಲಿ ಪೀಠದ ಜಯ ಮೃತ್ಯುಂಜಯ ಸ್ವಾಮೀಜಿ ಆಕ್ಷೇಪ ಮಾಡಿದ್ದಾರೆ. ಚಿತ್ರದುರ್ಗದಲ್ಲಿ ಮಾತನಾಡಿದ ಮಾಜಿ ಸಿಎಂ ಸಿದ್ದರಾಮಯ್ಯ, ಮುಚ್ಚಿಹೋಗಿದ್ದ ಪ್ರಕರಣವನ್ನು ಮತ್ತೆ ಕೆದಕಿರುವುದು ರಾಜಕೀಯ ಪ್ರೇರಿತವಾಗಿದೆ ಎಂದು ಹೇಳಿದರೆ, ಕೇಂದ್ರ ತನಿಖಾ ಸಂಸ್ಥೆ ರಾಜಕೀಯ ಒತ್ತಡಕ್ಕೆ ಮಣಿಯಬಾರದು. ವಿನಯ ಅವರಿಗೆ ನಮ್ಮ ಬೆಂಬಲವಿದೆ ಎಂದು ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಹರಿಹರದ ಪಂಚಮಸಾಲಿ ಜಗದ್ಗುರು ಪೀಠದ ಶ್ರೀವಚನಾನಂದ ಸ್ವಾಮೀಜಿ ಮಾತನಾಡಿ ರಾಜಕೀಯ ಕಾರಣಕ್ಕೆ ಮಾಜಿ ಸಚಿವರಿಗೆ ತೊಂದರೆ ನೀಡಬಾರದು. ಷಡ್ಯಂತ್ರದ ಕ್ರಮವನ್ನು ಖಂಡಿಸುತ್ತೇವೆ ಎಂದರು. ಬಂಧನ ಬೆಳವಣಿಗೆಯಲ್ಲಿ ಬಿಜೆಪಿಯ ಕೇಂದ್ರ ನಾಯಕರ ಕೈವಾಡ ಇದೆ ಎಂದು ಕೂಡಲಸಂಗಮದ ಪಂಚಮಸಾಲಿ ಪೀಠದ ಜಯ ಮೃತ್ಯುಂಜಯ ಸ್ವಾಮೀಜಿ ಆರೋಪಿಸಿದ್ದಾರೆ.

# ಸಿಬಿಐ ಬಲೆಗೆ ಬಿದ್ದ ವಿನಯ ಕುಲಕರ್ಣಿ

**1ನೇ ಪುಟದಿಂದ** ▶ ವಿಧಾನ ಪರಿಷತ್ ಸದಸ್ಯ ಶ್ರೀನಿವಾಸ ಮಾನೆ ಸೇರಿದಂತೆ ಅನೇಕ ಕಾಂಗ್ರೆಸ್ ಮುಖಂಡರು ಠಾಣೆ ಎದುರು ಸಂಜೆವರೆಗೂ ಕಾದು ಕುಳಿತರು. ಬಂಧನದ ಹಿಂದೆ ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಕೈವಾಡವಿದೆ. ಸರ್ಕಾರ ಸಿಬಿಐಯನ್ನು ದುರುಪಯೋಗ ಮಾಡಿಕೊಂಡಿದೆ. ಕೂಡಲೇ ವಿನಯ ಕುಲಕರ್ಣಿ ಅವರನ್ನು ಬಿಡುಗಡೆ ಮಾಡಬೇಕೆಂದು ಆಗ್ರಹಿಸಿದರು.

ಇದೇ ವೇಳೆ ಮಹಿಳಾ ಕಾಂಗ್ರೆಸ್ ಕಾರ್ಯಕರ್ತೆಯರು ಕಪ್ಪು ಬಟ್ಟೆ ಧರಿಸಿ ಪ್ರತಿಭಟಿಸಿದರು. ಠಾಣೆ ಎದುರು ಜಮಾಯಿಸಿದ ಕೆಲವು ಅಭಿಮಾನಿಗಳು ಅಳುತ್ತಲೇ ವಿನಯ ಕುಲಕರ್ಣಿ ಪರ ಘೋಷಣೆ ಕೂಗಿದರು. ಠಾಣೆಯಿಂದ ವಿನಯ ಅವರನ್ನು ಜಿಲ್ಲಾಸ್ಪತ್ರೆಗೆ ಕರೆದುಕೊಂಡು ಹೋಗುತ್ತಿದ್ದಂತೆಯೇ ಕೈಯಲ್ಲಿ ಚಪ್ಪಲಿ ಹಿಡಿದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ವಿರುದ್ಧ ಘೋಷಣೆ ಕೂಗಿದರು.

**ಏನಿದು ಪ್ರಕರಣ?:** 2016ರ ಜೂ.15ರಂದು ಧಾರವಾಡದ ಸಪ್ತಾಪೂರ 'ಉದಯ ಜಿಮ್'ನಲ್ಲಿ ಯೋಗೀಶಗೌಡ ಹತ್ಯೆಯಾಗಿತ್ತು. ಈ ಹತ್ಯೆ ಮರುದಿನವೇ ಬಸವರಾಜ ಮುತ್ತಗಿ ಅವರ ತಂಡವನ್ನು ಆರೋಪಿಗಳನ್ನಾಗಿ ಪೊಲೀಸರು ಬಂಧಿಸಿದ್ದರು. ಜಮೀನು ವಿವಾದದಿಂದ ಕೊಲೆ ಮಾಡಿರುವುದಾಗಿ ಮುತ್ತಗಿ ತಂಡ ಹೇಳಿಕೊಂಡಿತ್ತು. ಅಂದು ಪೊಲೀಸರು ತನಿಖೆ ನಡೆಸಿ ಸರ್ಕಾರಕ್ಕೆ ಇದು ಜಮೀನು ವಿವಾದ ಹಿನ್ನೆಲೆ ನಡೆದ ಕೃತ್ಯ. ಈಗಾಗಲೇ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ವರದಿ ಕೊಟ್ಟಿದ್ದರು. ಆದರೆ ಈ ಹತ್ಯೆ ಹಿಂದೆ ಸಚಿವರ ಕೈವಾಡವಿದೆ ಎಂದು ಯೋಗೀಶಗೌಡ ಕುಟುಂಬ ಆರೋಪಿಸಿತ್ತು. ಅದಕ್ಕಾಗಿ ನ್ಯಾಯಾಲಯ ಮೆಟ್ಟಿಲೇರಿದ್ದರು. ಅಲ್ಲದೇ, ಎರಡು ವರ್ಷಗಳ ಹಿಂದೆ ಬಿಜೆಪಿ ಸರ್ಕಾರ ರಚನೆಯಾಗುತ್ತಿದ್ದಂತೆ ಪ್ರಕರಣವನ್ನು ಸಿಬಿಐಗೆ ಒಪ್ಪಿಸಲಾಗಿತ್ತು. 500ಕ್ಕೂ ಹೆಚ್ಚು ಜನರನ್ನು ವಿಚಾರಣೆಗೆ ಒಳಪಡಿಸಿ ಮಾಹಿತಿ ಕಲೆ ಹಾಕಿದ ಸಿಬಿಐ, ವಿನಯ ಕುಲಕರ್ಣಿ ಸಹೋದರ ವಿಜಯ ಅವರನ್ನು ಕೂಡ ವಿಚಾರಣೆಗೆ ಒಳಪಡಿಸಿತ್ತು. ಕೆಲ ತಿಂಗಳ ಹಿಂದಷ್ಟೇ ಕೊಲೆ ಮಾಡಿದ ನಿಜವಾದ ಸುಪಾರಿ ಹಂತಕರನ್ನು ಬಂಧಿಸಿತ್ತು. ಇದೀಗ ವಿನಯ ಕುಲಕರ್ಣಿ ಅವರನ್ನು ಬಂಧಿಸಿದೆ.

ನನ್ನ ತಮ್ಮ ಕೊಲೆಯಾಗಿ ಇಷ್ಟು ದಿನದ ಮೇಲೆ ವಿನಯ ಹಾಗೂ ವಿಜಯ ಕುಲಕರ್ಣಿ ಅವರನ್ನು ವಿಚಾರಣೆ ಮಾಡಿದ್ದು ಸಮಾಧಾನವಾಗಿದೆ. ಈಗ ನಮ್ಮ ಕುಟುಂಬಕ್ಕೆ ನ್ಯಾಯ ಸಿಗುವ ವಿಶ್ವಾಸವಿದೆ. ಈ ಹತ್ಯೆ ಪ್ರಕರಣದಲ್ಲಿ ಇನ್ನೂ ಕೆಲ ಗಣ್ಯ ವ್ಯಕ್ತಿಗಳು ಭಾಗಿಯಾಗಿದ್ದು, ಅವರನ್ನೂ ಕರೆದು ವಿಚಾರಣೆ ಮಾಡಬೇಕು.

• ಮಹಾದೇವಿ, ಯೋಗೀಶಗೌಡರ ಸಹೋದರಿ

ನಾನು ಒಬ್ಬಳೇ ಕಾಂಗ್ರೆಸ್ ಪಕ್ಷ ಸೇರಿಲ್ಲ. ಬಿಜೆಪಿಯಲ್ಲಿದ್ದ ಅನೇಕ ಮಹಿಳೆಯರೂ ಕಾಂಗ್ರೆಸ್ ಸೇರಿದ್ದಾರೆ. ಆದರೆ, ನಾನು ಕಾಂಗ್ರೆಸ್ ಸೇರಿದ್ದೇ ದೊಡ್ಡ ಸುದ್ದಿಯಾಗಿದೆ. ನನ್ನ ಪತಿ ಜಿಪಂ ಸದಸ್ಯರಾಗಿ ಕ್ಷೇತ್ರದ ಅಭಿವೃದ್ಧಿ ಮಾಡಬೇಕು ಎಂದಿದ್ದರು. ಅವರ ಹತ್ಯೆ ತನಿಖೆ ನಡೆಸುತ್ತಿರುವ ಸಿಬಿಐನಿಂದ ನಮಗೆ ನ್ಯಾಯ ಸಿಗುವ ಭರವಸೆ ಇದೆ.

• ಮಲ್ಲಮ್ಮ ಗೌಡರ,
ಯೋಗೀಶಗೌಡ ಪತ್ನಿ, ಕಾಂಗ್ರೆಸ್ ನಾಯಕಿ



ಪೂರಕವಾಗಿ ಕಾನೂನು ತಿದ್ದುಪಡಿ ಅಥವಾ
ಕಾನೂನು ತರುವ ಉದ್ದೇಶ ಇದೆ ಎಂದು